1528 ದಿ=72=(50)

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ಇವರು ನಿಯಮ 72ರ ಮೇರೆಗೆ ಮಂಡಿಸಿರುವ ಸೂಚನೆಗೆ ಸರ್ಕಾರದ ಉತ್ತರ

**ವಿಷಯ:**

ಬೆಂಗಳೂರು ನಗರದ ದಕ್ಷಿಣ ಭಾಗದಲ್ಲಿರುವ ಬನಶಂಕರಿಯಿಂದ ತಲಘಟ್ಟಪುರದವರೆಗಿನ ಮುಖ್ಯ ರಸ್ತೆಯು ಪ್ರತಿದಿನ ಲಕ್ಷಾಂತರ ಜನ ಸಂಚಾರ ಮಾಡುವ ಪ್ರಮುಖ ರಸ್ತೆಯಾಗಿದೆ. ಈ ರಸ್ತೆಯಲ್ಲಿ ವಾಹನಗಳ ದಟ್ಟಣೆ ದಿನೇ ದಿನೇ ಹೆಚ್ಚಾಗುತ್ತಿದ್ದು, ಪ್ರಯಾಣಿಕರು ಈ ರಸ್ತೆಯಲ್ಲಿ ಸುಗಮ ಸಂಚಾರ ಮಾಡುವುದೇ ದುಸ್ತರವಾಗಿ ಬನಶಂಕರಿಯಿಂದ ತಲಘಟ್ಟಪುರ ತಲುಪಲು ಗಂಟೆಗಟ್ಟಲೆ ಕಾಯಬೇಕಾದ ಅನಿವಾರ್ಯತೆ ಉಂಟಾಗಿದೆ. ಇದರಿಂದ ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲಗಳ ಬಗ್ಗೆ ಮತ್ತು ಈ ರಸ್ತೆಯಲ್ಲಿ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಫ್ಲೈಓವರ್ ನಿರ್ಮಾಣ ಅಥವಾ ಬೇರೆ ಯಾವುದಾದರೂ ಯೋಜನೆಯನ್ನು ರೂಪಿಸುವ ಕುರಿತು ಮಾನ್ಯ ಉಪ ಮುಖ್ಯ ಮಂತ್ರಿಗಳ ಗಮನ ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ.

**ಉತ್ತರ:**

ಕನಕಪುರ ರಸ್ತೆಯು ನಗರದ ಒಂದು ಪ್ರಮುಖ ರಸ್ತೆಯಾಗಿದ್ದು, ಸದರಿ ರಸ್ತೆಗೆ ಹೊಂದಿಕೊಂಡಿರುವ ಪ್ರದೇಶಗಳು ಅಭಿವೃದ್ಧಿಯಾಗುತ್ತಿರುವ ಹಿನ್ನೆಲೆಯಲ್ಲಿ ದಿನೇ ದಿನೇ ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದು, ಸದರಿ ವಿಷಯವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಕನಕಪುರ ಮುಖ್ಯರಸ್ತೆಯನ್ನು ಬನಶಂಕರಿಯಿಂದ ನೈಸ್ ರಸ್ತೆಯವರೆಗೆ ಸರ್ಕಾರದ ಅನುದಾನದ ಅಡಿಯಲ್ಲಿ ಬಿಬಿಎಂಪಿ ವತಿಯಿಂದ ಹೈಡೆನ್ಸಿಟಿ ಕಾರಿಡಾರ್ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಮೆ॥ ಕೆ.ವಿ.ಆರ್ ಕನ್ಸ್ಟ್ರಕ್ಷನ್ಸ್ ಪ್ರೈ ಲಿ., ಎಂಬ ಗುತ್ತಿಗೆದಾರರಿಗೆ ಕಾರ್ಯಾದೇಶವನ್ನು ದಿನಾಂಕ: 27.03.2023 ರಂದು ನೀಡಲಾಗಿರುತ್ತದೆ. ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಯೋಜನೆ ಅಡಿಯಲ್ಲಿ ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ ಏಕ ರೂಪ ರಸ್ತೆ ಅಗಲ ಯೋಜನೆ (Uniform Carriage Width) ನಿರ್ಮಿಸಲಾಗುವುದು.

ಮುಂದುವರೆದಂತೆ, ಕನಕಪುರ ರಸ್ತೆಯ ಸಾರಕ್ಕಿ ವೃತ್ತದಲ್ಲಿ ಅತೀ ಹೆಚ್ಚು ವಾಹನ ದಟ್ಟಣೆ ಕಂಡುಬಂದಿದ್ದು, ಈ ವೃತ್ತದಲ್ಲಿ ಮೆಟ್ರೋ ಸಂಸ್ಥೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ 02 ಮಟ್ಟದಲ್ಲಿ ಮೇಲ್ಸೇತುವೆ (Double Decker) ಅನ್ನು ನಿರ್ಮಿಸಿ 01 ಮಟ್ಟದ ಮೇಲ್ಸೇತುವೆಯನ್ನು ವಾಹನ ಸಂಚಾರಕ್ಕೆ ಮತ್ತು 02ನೇ ಮಟ್ಟದಲ್ಲಿ ಮೆಟ್ರೋ ಮೇಲ್ಸೇತುವೆ ನಿರ್ಮಿಸಲು ಯೋಜನೆಯನ್ನು ರೂಪಿಸಲಾಗುತ್ತಿರುತ್ತದೆ.

ಮಾನ್ಯ ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರು ಮೆಟ್ರೋ ಸಂಸ್ಥೆಗೆ ಈಗಾಗಲೇ ಮೆಟ್ರೋ ಬರುವ ಮಾರ್ಗಗಳಲ್ಲಿ Double Decker ಅನ್ನು ನಿರ್ಮಿಸುವ ಯೋಜನೆಯನ್ನು ತಯಾರಿಸಬೇಕೆಂದು ಸೂಚಿಸಿರುತ್ತಾರೆ.

**ಸಂಖ್ಯೆ: ನಅಇ 54 ಎಂಎನ್‌ವೈ 2024 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ